ರಾಜ್ಯದಲ್ಲಿ ಹೆಚ್ಚುತ್ತಿರುವ ಮನೆ ಪಾಠ ವ್ಯವಸ್ಥೆ

157 : (209)

ಶ್ರೀ ರಾಮಲಿಂಗಾರೆಡ್ಡಿ (ಬಿ.ಟಿ.ಎಂ. ಲೇಔಟ್)

ಅ) ರಾಜ್ಯದಲ್ಲಿ ಎಲ್.ಕೆ.ಜಿ. ಯಿಂದಲೇ ಮನೆ ಪಾಠಕ್ಕೆ ಕಳುಹಿಸುವ ಪ್ರವೃತ್ತಿ ಜಾಸ್ತಿಯಾಗುತ್ತಿರುವುದು ಸರ್ಕಾರದ ಗಮನ ಬಂದಿದೆಯೇ;

ಆ) ಇದಕ್ಕೆ ಕಾರಣಗಳೇನು (ವಿವರ ನೀಡುವುದು)

ಇ) ಗ್ರಾಮೀಣ ಪ್ರದೇಶದಲ್ಲೂ ಈ ಪ್ರವೃತ್ತಿ ಹೆಚ್ಚಾಗುತ್ತಿರುವುದು ನಿಜವೇ;

ಈ) ಶಾಲೆಗಳಲ್ಲಿನ ಶಿಕ್ಷಣ ಬೋಧನೆ ಗುಣಮಟ್ಟ ಕಡಿಮೆಯಾಗಿರುವುದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಬಂದಿಲ್ಲ.

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಈ) ಶಿಕ್ಷಕರ ಬೋಧನಾ ಗುಣಮಟ್ಟವನ್ನು ಉತ್ತಮಪಡಿಸಲು ಶಿಕ್ಷಕರಿಗೆ ವಿಶೇಷ ತರಬೇತಿಗಳನ್ನು ಇಲಾಖೆಯು ನೀಡುತ್ತಿದ್ದು. ಬೋಧನಾ ಸಾಮರ್ಥ್ಯವನ್ನು ಹೆಚ್ಚಿಸಲು ಕಾರ್ಯಾಗಾರವನ್ನು ಹಮ್ಮಿಕೊಂಡು ಸಂಪನ್ಮೂಲಕ ವ್ಯಕ್ತಿಗಳ ಮೂಲಕ ಜಿಲ್ಲಾ ತರಬೇತಿ ಸಂಸ್ಥೆಗಳ ಮೂಲಕ, ಕ್ಷೇತ್ರ ಸಂಪನ್ಮೂಲ ಕೇಂದ್ರಗಳ (ಬಿ.ಆರ್.ಸಿ.) ಮೂಲಕ ತರಬೇತಿಯನ್ನು ನೀಡಿ ಬೋಧನಾ ಗುಣಮಟ್ಟವನ್ನು ಉತ್ತಮಗೊಳಿಸಲಾಗುತ್ತಿದೆ.

ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾರಂಭ

125 : (266)

ಶ್ರೀ ಖಾದರ್ ಯು.ಟಿ. (ಮಂಗಳೂರು)

ಅ) ಮಂಗಳೂರು ವಿಧಾನಸಭಾ ಕ್ಷೇತ್ರದಲ್ಲಿ ಯಾವುದೇ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಹೊಸದಾಗಿ ಸರ್ಕಾರಿ ಕಾಲೇಜನ್ನು ಯಾವ ಸ್ಥಳದಲ್ಲಿ ಪ್ರಾರಂಭಿಸಲು ಸರ್ಕಾರ ಉದ್ದೇಶಿಸಿದೆ ? (ವಿವರ ಒದಗಿಸುವುದು)